I/383629/2023

# ಕರ್ನಾಟಕ ಸರ್ಕಾರ

ಸಂಖ್ಯೆ:ಸಕನಿ/ಇಡಿ-7/ಸಿ.ಆರ್-85/2022-23

ಆಯುಕ್ತರ ಕಛೇರಿ ಸಮಾಜ ಕಲ್ಯಾಣ ಇಲಾಖೆ,
5ನೇ ಮಹಡಿ, ಬಹುಮಹಡಿಗಳ ಕಟ್ಟಡ,
ಡಾ|| ಬಿ.ಆರ್.ಅಂಬೇಡ್ಕರ್ ವೀಧಿ,
ಬೆಂಗಳೂರು, ದಿನಾಂಕ:31-01-2023

## ಸುತ್ತೋಲೆ

ವಿಷಯ:- ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಎಲ್ಲಾ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ಸಮರ್ಪಕ ಕಾರ್ಯ ನಿರ್ವಹಣೆ ಬಗ್ಗೆ.

******

ಸಮಾಜ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ನಿಲಯಗಳಲ್ಲಿ ದಾಖಲಾಗಿರುವ ನಿಲಯಾರ್ಥಿಗಳಿಗೆ ಸ್ವಂತ ಮನೆಯ ವಾತಾವರಣವನ್ನು ಕಲ್ಪಿಸಿ, ಅವರುಗಳ ಸಾಮಾಜಿಕ ಮತ್ತು ಶೈಕ್ಷಣಿಕ ಅಭಿವೃದ್ಧಿಗೆ ಒತ್ತು ನೀಡಬೇಕಾಗಿರುವುದು ಅವಶ್ಯವಾಗಿದ್ದು, ಶೈಕ್ಷಣಿಕ ಪ್ರಗತಿ ಸಾಮಾಜಿಕ ಸಮಾನತೆಯ ದೃಷ್ಠಿಯು ಮಹತ್ವದಾಗಿರುವುದರಿಂದ ನಿಲಯಾರ್ಥಿಗಳಿಗೆ ಶುದ್ಧ ಕುಡಿಯುವ ನೀರು, ಉತ್ತಮವಾದ ಪೌಷ್ಟಿಕ ಆಹಾರ, ಪ್ರಾಥಮಿಕ ಆರೋಗ್ಯ ತಪಾಸಣೆ, ಪರಿಶುದ್ಧ ಗಾಳಿ, ಬೆಳಕು ಹಾಗೂ ನೈರ್ಮಲ್ಯಕ್ಕೆ ಹೆಚ್ಚಿನ ಮಹತ್ವ ನೀಡುವ ಉದ್ದೇಶದಿಂದ ಈಗಾಗಲೇ ಸ್ಪಷ್ಟ ನಿರ್ದೇಶನಗಳನ್ನು ನೀಡಲಾಗಿರುತ್ತದೆ.

ಆದಾಗ್ಯೂ ನಿಲಯಗಳ ಅಸಮರ್ಪಕ ನಿರ್ವಹಣೆ ಬಗ್ಗೆ ಹಲವಾರು ದೂರುಗಳು ಈ ಕಛೇರಿಗೆ ಸಲ್ಲಿಕೆಯಾಗುತ್ತಲೇ ಇದೆ. ಮುಂದುವರೆದು, ದಿನಾಂಕ:08-11-2022 ರಲ್ಲಿ ಪದವಿ ಪೂರ್ವ ಕಾಲೇಜು ಬಾಲಕಿಯರ ವಿದ್ಯಾರ್ಥಿ ನಿಲಯ, ಬೇಲೂರು ರಸ್ತೆ, ಚಿಕ್ಕಮಗಳೂರು ಇಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗೆ ಆರೋಗ್ಯದಲ್ಲಿ ವ್ಯತ್ಯಾಸವಾಗಿರುವ ಬಗ್ಗೆ ವರದಿಯಾಗಿದ್ದು, ಸದರಿ ಘಟನೆಗಳು ಮರುಕಳಿಸದಂತೆ, ಸಂಬಂಧಪಟ್ಟ ತಾಲ್ಲೂಕು ಮಟ್ಟದ ಅಧಿಕಾರಿಗಳು, ನಿಲಯದ ಸಿಬ್ಬಂದಿಗಳು ಹಾಗೂ ವಾರ್ಡನ್ ರವರು ಕಾರ್ಯನಿರ್ವಹಣೆ ಮಾಡುವ ನಿಟ್ಟಿನಲ್ಲಿ ಮತ್ತೊಮ್ಮೆ ಈ ಕೆಳಗಿನಂತೆ ನಿರ್ದೇಶನಗಳನ್ನು ನೀಡಲಾಗಿದೆ.

- ವಿದ್ಯಾರ್ಥಿ ನಿಲಯದ ಪ್ರತಿಯೊಬ್ಬ ವಿದ್ಯಾರ್ಥಿಯ ಸಾಮಾನ್ಯ ಆರೋಗ್ಯ ತಪಾಸಣೆಯನ್ನು ಸ್ಥಳೀಯ ವೈದ್ಯಾಧಿಕಾರಿಗಳಿಂದ ಪ್ರತಿ ಮೂರು ತಿಂಗಳಿಗೊಮ್ಮೆ ಕಡ್ಡಾಯವಾಗಿ ಮಾಡಿಸಬೇಕು.
- ಪತ್ರಿ ತಿಂಗಳಿಗೊಮ್ಮೆ ವಸತಿ ನಿಲಯದ ಬಾಲಕಿಯರಿಗೆ ಸ್ಥಳೀಯ ಸರ್ಕಾರಿ ವೈದ್ಯಾಧಿಕಾರಿಗಳಿಂದ ಪ್ರತಿ ವಿದ್ಯಾರ್ಥಿಯ ಆರೋಗ್ಯ ತಪಾಸಣೆ ಮಾಡಿಸತಕ್ಕದ್ದು. ಈ ಬಗ್ಗೆ ನಿಗಧಿತ ವಹಿಯಲ್ಲಿ ದಾಖಲಾಯಿಸುವುದು.
- ಮಧ್ಯಾಂತರ ರಜೆಯ ನಂತರ ವಿದ್ಯಾರ್ಥಿಗಳು ಪುನಃ ನಿಲಯಕ್ಕೆ ಹಾಜರಾದಾಗ ಮತ್ತೊಮ್ಮೆ ಆರೋಗ್ಯ ತಪಾಸಣೆಯಾಗಿ ಸಾಮಾನ್ಯಾರೋಗ್ಯವಿರುವವರಿಗೆ ಪ್ರವೇಶ ನೀಡುವುದು.
- ಪ್ರತಿ ವಿದ್ಯಾರ್ಥಿನಿಲಯದಲ್ಲಿ ಪ್ರಥಮ ಚಿಕ್ಕಿತ್ಸಾ ಪಟ್ಟಿಗೆಯನ್ನು ನಿರ್ವಹಿಸಬೇಕು.
- ವಿದ್ಯಾರ್ಥಿಗಳ ದೈಹಿಕ ಮತ್ತು ಮಾನಸಿಕ ಆರೋಗ್ಯ ರಕ್ಷಣೆಗೆ ಸಹಕಾರಿಯಾಗುವಂತೆ ಪೊಕ್ಸೋ ಕಾಯ್ದೆ ಬಗ್ಗೆ ಗಣ್ಯ ವ್ಯಕ್ತಿಗಳಿಂದ ನಿಲಯದಲ್ಲಿ ಆಗಾಗ್ಗೆ ಉಪನ್ಯಾಸ ಏರ್ಪಡಿಸಬೇಕು.
- ಪತ್ರಿ ಮೂರು ತಿಂಗಳಿಗೊಮ್ಮೆ ಪೋಷಕರ ಸಭೆ ನಡೆಸುವುದು.
- ನಿಲಯದ ಮೇಲ್ವಿಚಾರಕರ ಪೂರ್ವಾನುಮತಿ ಪಡೆಯದೇ, ವಿದ್ಯಾರ್ಥಿಗಳನ್ನು ಊರಿಗೆ ಕಳುಹಿಸಬಾರದು. ಒಂದುವೇಳೆ ಯಾವ ವಿದ್ಯಾರ್ಥಿಯಾದರೂ ಅನಧಿಕೃತವಾಗಿ 07 ದಿನಗಳು ಗೈರು ಹಾಜರಾದಲ್ಲಿ ಕೂಡಲೇ ಮೇಲಾಧಿಕಾರಿಗಳಿಗೆ ಲಿಖಿತವಾಗಿ ವರದಿ ಮಾಡಬೇಕು. ಹಾಗೂ ವಿದ್ಯಾರ್ಥಿಯ ಪಾಲಕರನ್ನು ಕರೆಸಿ, ದೃಢೀಕರಿಸಿಕೊಳ್ಳಬೇಕು.
- ಸರ್ಕಾರದ ಆದೇಶದಂತೆ ವಸತಿ ನಿಲಯಕ್ಕೆ ಅನ್ಯ ವ್ಯಕ್ತಿಗಳ ಪ್ರವೇಶವನ್ನು ನಿರ್ಭಂಧಿಸುವುದು.
- ವಿದ್ಯಾರ್ಥಿನಿಲಯಕ್ಕೆ ಪ್ರವೇಶ ಪಡೆದ ಎಲ್ಲಾ ವಿದ್ಯಾರ್ಥಿಗಳು ದಿನ ನಿತ್ಯ ಶಾಲೆಗೆ/ಕಾಲೇಜಿಗೆ ಹಾಜರಾಗುತ್ತಿರುವರೇ ಎಂಬುದರ ಬಗ್ಗೆ ನಿಗಧಿತ ವಹಿಯಲ್ಲಿ ದಾಖಲಿಸುವುದು.
- ವಿದ್ಯಾರ್ಥಿಗಳ ವ್ಯಾಸಂಗದ ಪ್ರಗತಿ, ಆರೋಗ್ಯ, ಶಿಸ್ತು, ನಡತೆ, ಹಾಜರಾತಿ ವೈಯಕ್ತಿಕ ವಿವರಗಳುಳ್ಳ ಕಡತವನ್ನು ನಿರ್ವಹಿಸಿ ಪಾಲಕರ ಸಭೆಯಲ್ಲಿ ವಿದ್ಯಾರ್ಥಿಯ ಪಾಲಕ/ಪೋಷಕರಿಗೆ ಕಡತದಲ್ಲಿನ ವಿವರಗಳನ್ನು ತೋರಿಸಿ ಸಹಿ ಪಡೆಯುವುದು.
- ವಿಶೇಷವಾಗಿ ಹೆಣ್ಣು ಮಕ್ಕಳ ಸಂಬಂಧ ನಿಲಯದ ಮಟ್ಟದಲ್ಲಿಯೆ ಆಂತರಿಕ ದೂರು ನಿರ್ವಹಣಾ ಘಟಕಗಳನ್ನು ಸ್ಥಾಪನೆ ಮಾಡುವುದು.
- ವಿದ್ಯಾರ್ಥಿನಿಲಯಗಳಲ್ಲಿ ವಿದ್ಯಾರ್ಥಿಗಳಿಗೆ ಮಕ್ಕಳ ಹಕ್ಕುಗಳ ಬಗ್ಗೆ ಅರಿವು ಮೂಡಿಸುವುದು.

- ಪ್ರತಿ ತಿಂಗಳಿಗೊಮ್ಮೆ ಹೆಣ್ಣುಮಕ್ಕಳಿಗೆ ಸುರಕ್ಷತೆ ಬಗ್ಗೆ ಜಾಗೃತಿ ಮೂಡಿಸುವುದು.
- ಬಾಲಕಿಯರ ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳ ಚಲನ ವಲನಗಳ ಬಗ್ಗೆ ಗಮನ ವಹಿಸುವುದು.
- ಕರಾಟೆ ತರಭೇತಿ ಜೊತೆಗೆ ಯೋಗ ,ಕ್ರೀಡಾ ಹಾಗು ಸಾಂಸ್ಕೃತಿಕ ಚಟುವಟಿಕೆಗಳನ್ನೇರ್ಪಡಿಸುವುದು.
- ನಿಲಯಗಳಲ್ಲಿನ ವಿದ್ಯಾರ್ಥಿಗಳಿಗೆ ಆಗಾಗ್ಗೆ ಸಂವಿದಾನ ಹಾಗು ಕಾನೂನು ವಿಷಯಗಳ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಆಯೋಜಿಸುವುದು.

ಈ ಮೇಲ್ಕಂಡ ಸೂಚನೆಗಳೊಂದಿಗೆ ಆಗಿಂದಾಗ್ಗೆ ನಿಲಯಗಳ ನಿರ್ವಹಣೆಗೆ ಸಂಬಂಧಿಸಿದಂತೆ ಕೇಂದ್ರ ಕಾರ್ಯಲಯದಿಂದ
ಹೊರಡಿಸಲಾಗುತ್ತಿರುವ ಸೂಚನೆಗಳನ್ನು ಹಾಗೂ ನಿಲಯಪಾಲಕರ ಕೈಪಿಡಿ ಪ್ರಕಾರ ಹೊರಡಿಸಿರುವ ಮಾರ್ಗಸೂಚಿಗಳನ್ನು ತಪ್ಪದೇ ಅನುಸರಿಸಿ, ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳನ್ನು ಸುವ್ಯವಸ್ಥಿತವಾಗಿ ನಿರ್ವಹಿಸಿ, ಪರಿಶಿಷ್ಟ ಜಾತಿ ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಗೆ ಕ್ರಮವಹಿಸಲು ಸೂಚಿಸಿದೆ.

Signed by K Rakesh Kumar
Date: 08-02-2023 15:46:59

ಆಯುಕ್ತರು,
ಸಮಾಜ ಕಲ್ಯಾಣ ಇಲಾಖೆ,
ಬೆಂಗಳೂರು.

<u>ಪ್ರತಿಯನ್ನು:-</u>

1. ಎಲ್ಲಾ ಜಿಲ್ಲೆಗಳ ಜಂಟಿ ನಿರ್ದೇಶಕರು/ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ರವರಿಗೆ ಮುಂದಿನ ಕ್ರಮಕ್ಕಾಗಿ.
2. ಎಲ್ಲಾ ತಾಲ್ಲೂಕುಗಳ ಸಹಾಯಕ ನಿರ್ದೇಶಕರಿಗೆ, ಮುಂದಿನ ಸೂಕ್ತ ಕ್ರಮಕ್ಕಾಗಿ.
3. ಎಲ್ಲಾ ವಾರ್ಡನ್ ಗಳಿಗೆ (ಜಂಟಿ/ಉಪ ನಿರ್ದೇಶಕರ ಮುಖಾಂತರ) ಸೂಕ್ತ ಕ್ರಮಕ್ಕಾಗಿ.

–

–